. **Akashvani : Bangalore**
**10.08.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**10.08.2024** **18.40 hrs**

<><*<><>*><>

## ಮುಖ್ಯಾಂಶಗಳು

<><*<><>*><>

೧. ರಾಜ್ಯ ಸರ್ಕಾರದ ಹಗರಣಗಳಿಂದ ಅಭಿವೃದ್ಧಿಗೆ ಹಿನ್ನಡೆ ; ಬಿಜೆಪಿ-ಜೆಡಿಎಸ್ ನಾಯಕರ ಆರೋಪ

೨. ಪ್ರತಿಪಕ್ಷಗಳ ಸುಳ್ಳು ಆರೋಪಗಳನ್ನು ಕಾನೂನಾತ್ಮಕವಾಗಿ ಎದುರಿಸಲಾಗುವುದು - ಆಡಳಿತ ಪಕ್ಷದ ಸಮರ್ಥನೆ

೩. ಸ್ವಾತಂತ್ರ್ಯೋತ್ಸವ ಹಿನ್ನೆಲೆ - ಜಿಲ್ಲಾಡಳಿತಗಳಿಂದ ವಿಧಾಯಕ ಕಾರ್ಯಕ್ರಮಗಳು

೪. ನೀರಿನಲ್ಲಿ ೨೬ ಪಲ್ಟಿ - ಮಂಗಳೂರು ಹುಡುಗ ಹ್ಯಾಡ್ರಿಯನ್ ವೇಗಸ್ ಹೆಸರಿನಲ್ಲಿ ನೊಬೆಲ್ ವಿಶ್ವದಾಖಲೆ

<><*<><>*><>

ಮುಡಾ ನಿವೇಶನ ಹಂಚಿಕೆ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ ಮತ್ತು ಜೆಡಿಎಸ್ ಹಮ್ಮಿಕೊಂಡಿದ್ದ ಮೈಸೂರು ಪಾದಯಾತ್ರೆ ಇಂದು ಮೈಸೂರು ತಲುಪಿದ್ದು, ಮಹಾರಾಜ ಕಾಲೇಜು ಮೈದಾನದಲ್ಲಿ ಸಮಾರೋಪ ಕಾರ್ಯಕ್ರಮ ನಡೆಯಿತು. ಈ ಹಗರಣದ ಬಗ್ಗೆ ವಿಧಾನಸಭೆಯಲ್ಲಿ ಚರ್ಚೆಗೆ ಅವಕಾಶ ದೊರೆತಿದ್ದರೆ ಪಾದಯಾತ್ರೆಯ ಅಗತ್ಯವಿರಲಿಲ್ಲ. ಬಿಜೆಪಿ ಮತ್ತು ಜೆಡಿಎಸ್ ನಡೆಸಿರುವ ಹೋರಾಟದ ಫಲಶೃತಿಯಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ೧೪ ನಿವೇಶನಗಳನ್ನು ಹಿಂದಿರುಗಿಸಿದರೆ ಸಾಲದು, ಇದಕ್ಕಾಗಿ ಅವರಿಗೆ ಕಾನೂನು ಪ್ರಕಾರ ಶಿಕ್ಷೆಯಾಗಬೇಕು ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆಗ್ರಹಪಡಿಸಿದ್ದಾರೆ. ಮೈಸೂರಿನಲ್ಲಿ ಇಂದು ನಡೆದ ಮೈಸೂರು ಚಲೋ

ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮುಡಾ ಹಗರಣ ಮಾತ್ರವಲ್ಲ ವಾಲ್ಮೀಕಿ ಹಗರಣ ಕೂಡ ದೇಶದಲ್ಲೇ ಬಹುದೊಡ್ಡ ಹಗರಣಗಳ ಸಾಲಿಗೆ ಸೇರುತ್ತದೆ. ಈ ಕುರಿತು ದೇಶದೆಲ್ಲೆಡೆ ಚರ್ಚೆಯಾಗುತ್ತಿದೆ ಎಂದರು. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮಾತನಾಡಿ, ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಜನರು ಆಕ್ರೋಶಗೊಂಡಿದ್ದಾರೆ. ಯಾವುದೇ ಜಿಲ್ಲೆ ಹಾಗೂ ತಾಲೂಕುಗಳಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ. ಮುಡಾ ಹಗರಣದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ರಾಜೀನಾಮೆ ನೀಡುವವರೆಗೂ ಬಿಜೆಪಿ-ಜೆಡಿಎಸ್ ಹೋರಾಟ ನಿಲ್ಲುವುದಿಲ್ಲ ಎಂದು ಟೀಕಿಸಿದರು. ರಾಜ್ಯದಲ್ಲಿ ಬಡವರಿಗೆ ಅನ್ಯಾಯವಾಗುತ್ತಿರುವುದನ್ನು ಪ್ರತಿಭಟಿಸುವ ಸಲುವಾಗಿ ಬಿಜೆಪಿ ಹಾಗೂ ಜೆಡಿಎಸ್ ಪಾದಯಾತ್ರೆ ಮೂಲಕ ಹೋರಾಟ ನಡೆಸುತ್ತಿವೆ. ಹಾಲಿ ಸರ್ಕಾರ ರೈತರು ಮತ್ತು ಬಡವರ ಸಂಕಷ್ಟಗಳಿಗೆ ಸ್ಪಂದಿಸುತ್ತಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು. ಸಮಾವೇಶದಲ್ಲಿ ಮಾತನಾಡಿದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ರಾಜ್ಯ ಸರ್ಕಾರ ಜನತೆಯ ವಿಶ್ವಾಸವನ್ನು ಕಳೆದುಕೊಂಡಿದೆ. ಭ್ರಷ್ಟಾಚಾರ ಆರೋಪಗಳಿಂದ ಸದ್ಯದಲ್ಲೇ ಪತನವಾಗಲಿದೆ ಎಂದರು. ವಿಧಾನಸಭಾ ಚುನಾವಣೆಯಲ್ಲಿ ೧೩೬ ಸ್ಥಾನಗಳನ್ನು ಗೆದ್ದಿದ್ದ ಕಾಂಗ್ರೆಸ್ ಪಕ್ಷ, ಲೋಕಸಭಾ ಚುನಾವಣೆಯಲ್ಲಿ ಕೇವಲ ೯ ಸ್ಥಾನಗಳನ್ನು ಮಾತ್ರ ಗೆದ್ದಿದೆ. ಸರ್ಕಾರದ ಜನವಿರೋಧಿ ನೀತಿಗಳೇ ಪಕ್ಷದ ಈ ಅಧಃಪತನಕ್ಕೆ ಕಾರಣ ಎಂದು ಅವರು ಹೇಳಿದರು.

**<><*<><>*><>**

ಮುಡಾ ನಿವೇಶನ ಹಂಚಿಕೆ ಮತ್ತು ವಾಲ್ಮೀಕಿ ನಿಗಮ ಪ್ರಕರಣ ಕುರಿತಂತೆ ಬಿಜೆಪಿ - ಜೆಡಿಎಸ್ ನಾಯಕರು ರಾಜಕೀಯ ಲಾಭಕ್ಕಾಗಿ ಮಾಡುತ್ತಿರುವ ಸುಳ್ಳು ಆರೋಪಗಳನ್ನು ರಾಜಕೀಯವಾಗಿ ಹಾಗೂ ಕಾನೂನಾತ್ಮಕವಾಗಿ ಎದುರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನಲ್ಲಿಂದು ಹೇಳಿದ್ದಾರೆ. ಪ್ರತಿಪಕ್ಷಗಳ ಸುಳ್ಳು ಆರೋಪಗಳನ್ನು ರಾಜ್ಯದ ಜನತೆಯ ಗಮನಕ್ಕೆ ತರಲು ತಮ್ಮ ಪಕ್ಷ ಜನಾಂದೋಲನ ನಡೆಸಿದೆ. ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ಹುನ್ನಾರ ಮಾಡಲಾಗುತ್ತಿದೆ. ವಾಲ್ಮೀಕಿ ನಿಗಮ ಹಗರಣ ಹೊರಗೆ ಬಂದ ತಕ್ಷಣ ಸರ್ಕಾರ ವಿಶೇಷ ತನಿಖಾ ದಳವನ್ನು ರಚಿಸಿದ್ದು, ಹಣ ವಾಪಸ್ ವಸೂಲಿ ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ. ಮುಡಾ ವಿಚಾರದಲ್ಲಿ ತಮ್ಮ ಕಡೆಯಿಂದ ಯಾವುದೇ ತಪ್ಪು

ನಡೆದಿಲ್ಲ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ತಪ್ಪಿಗೆ ತಮ್ಮ ಮೇಲೆ ಇಲ್ಲಸಲ್ಲದ ಆರೋಪ ಮಾಡಲಾಗುತ್ತಿದೆ ಎಂದು ಸಿದ್ದರಾಮಯ್ಯ ಎಕ್ಸ್ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಈ ನಡುವೆ, ಮುಡಾ ಪ್ರಕರಣವನ್ನು ಪ್ರಾಸಿಕ್ಯೂಷನ್‌ಗೆ ಒಪ್ಪಿಸಲು ರಾಜ್ಯಪಾಲರು ಅನುಮತಿ ನೀಡುವುದಿಲ್ಲ ಎಂಬ ವಿಶ್ವಾಸವಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರದ ಈ ನಿರೀಕ್ಷೆ ಸುಳ್ಳಾದಲ್ಲಿ ಕಾನೂನು ಹೋರಾಟ ನಡೆಸಲಾಗುವುದು. ಮುಂದಿನ ಬೆಳವಣಿಗೆಯನ್ನು ಗಮನಿಸಿ ರಾಷ್ಟ್ರಪತಿ ಭೇಟಿಗೆ ನಿರ್ಧರಿಸಲಾಗುವುದು ಎಂದರು. ರಾಜ್ಯಪಾಲರ ಕಚೇರಿಯಲ್ಲಿ ಬಾಕಿ ಪ್ರಕರಣಗಳನ್ನು ಬದಿಗೆ ಸರಿಸಿ ಮುಡಾ ವಿಚಾರದಲ್ಲಿ ತರಾತುರಿಯಲ್ಲಿ ನೋಟಿಸು ನೀಡಲಾಗಿದೆ ಎಂದು ಗೃಹ ಸಚಿವರು ಆರೋಪಿಸಿದ್ದಾರೆ. ಮತ್ತೊಂದೆಡೆ, ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿಗಳ ಪಾತ್ರವಿಲ್ಲ. ಜಮೀನು ಸ್ವಾಧೀನಕ್ಕೆ ಬದಲಾಗಿ ನಿವೇಶನಗಳನ್ನು ನೀಡಲಾಗಿದೆ. ಮತ್ತು ಈ ಎಲ್ಲ ಪ್ರಕ್ರಿಯೆಗಳನ್ನು ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಮಾಡಲಾಗಿದೆ. ಈಗ ಸುಮ್ಮನೆ ವಿವಾದ ಸೃಷ್ಟಿಸಲಾಗುತ್ತಿದೆ ಎಂದು ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ್ ಶಿವಮೊಗ್ಗದಲ್ಲಿಂದು ಹೇಳಿದ್ದಾರೆ. ಪ್ರತಿಪಕ್ಷ ನಾಯಕರ ಮೇಲಿರುವ ಆರೋಪಗಳ ಬಗ್ಗೆ ತನಿಖೆಯಾಗಬೇಕು. ಸರ್ಕಾರವನ್ನು ಅಸ್ಥಿರಗೊಳಿಸುವ ಪ್ರಯತ್ನಗಳಿಗೆ ಅವಕಾಶವಿರಬಾರದು. ಯಾವುದೇ ಆರೋಪದ ಬಗ್ಗೆ ಕಾನೂನು ಹೋರಾಟಕ್ಕೆ ಸರ್ಕಾರ ಸಿದ್ಧವಿದೆ ಎಂದು ಅವರು ಹೇಳಿದ್ದಾರೆ.

**<><*<><>*><>**

೭೮ನೇ ಸ್ವಾತಂತ್ರ್ಯೋತ್ಸವ ಆಚರಣೆಗೆ ದೇಶ ಸಜ್ಜಾಗುತ್ತಿದೆ. ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಹಿರಿಯ ಮಹನೀಯರನ್ನು ಸ್ಥಳೀಯ ಆಡಳಿತಗಳು ಸನ್ಮಾನಿಸಬೇಕು ಎಂದು ಸರ್ಕಾರ ನಿರ್ದೇಶನ ನೀಡಿರುವ ಹಿನ್ನೆಲೆಯಲ್ಲಿ ಎಲ್ಲೆಡೆ ಸ್ವಾತಂತ್ರ್ಯ ಹೋರಾಟಗಾರರನ್ನು ಸನ್ಮಾನಿಸಲಾಗುತ್ತಿದೆ. ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕು ಕೊಡೆಕಲ್ ಗ್ರಾಮದ ಸ್ವಾತಂತ್ರ್ಯ ಹೋರಾಟಗಾರ ಸಂಗಪ್ಪ ಮಂಟೆ ಅವರನ್ನು ಇಂದು ಜಿಲ್ಲಾಡಳಿತದ ವತಿಯಿಂದ ಸನ್ಮಾನಿಸಲಾಯಿತು. ಸ್ವಾತಂತ್ರ್ಯ ಸಂಗ್ರಾಮದ ವೇಳೆ ನಡೆದ ಕ್ವಿಟ್ ಇಂಡಿಯಾ ಚಳವಳಿಯಲ್ಲಿ ಭಾಗವಹಿಸಿದ್ದ ಯಾದಗಿರಿ ಜಿಲ್ಲೆಯ ನಾಲ್ವರು ಸ್ವಾತಂತ್ರ್ಯ ಹೋರಾಟಗಾರರ ಪೈಕಿ ಸಂಗಪ್ಪ ಮಂಟೆ ಅವರು ಒಬ್ಬರು. ಸ್ವಾತಂತ್ರ್ಯಕ್ಕಾಗಿ ಹೋರಾಡಿದ

ಹಿರಿಯರನ್ನು ಗೌರವಿಸುವುದು ಈಗಿನ ಪೀಳಿಗೆಗೆ ದೊರೆತಿರುವ ಸುವರ್ಣಾವಕಾಶವಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಬಿ. ಸುಶೀಲಾ ಹೇಳಿದರು. ಚಿತ್ರದುರ್ಗ ತಾಲ್ಲೂಕಿನ ಕೂನಬೇವು ಗ್ರಾಮದ ಸ್ವಾತಂತ್ರ್ಯ ಹೋರಾಟಗಾರ ಭೀಮಪ್ಪ ಅವರನ್ನು ಜಿಲ್ಲಾಡಳಿತದ ವತಿಯಿಂದ ಇಂದು ಸನ್ಮಾನಿಸಲಾಯಿತು. ಸ್ವಾತಂತ್ರ್ಯ ದಿನಾಚರಣೆಗೂ ಮುನ್ನ ಸ್ವಾತಂತ್ರ್ಯ ಹೋರಾಟಗಾರರ ಮನೆಗೆ ತೆರಳಿ ಸನ್ಮಾನಿಸಬೇಕು ಎಂದು ಸರ್ಕಾರ ಅಧಿಕಾರಿಗಳಿಗೆ ನಿರ್ದೇಶಿಸಿದೆ. ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಮನೆ ಮನೆಗಳಲ್ಲೂ ರಾಷ್ಟ್ರಧ್ವಜ ಹಾರಿಸಿ ಸಂಭ್ರಮಿಸಬೇಕು ಎಂದು ಕೇಂದ್ರ ಸರ್ಕಾರ ಕರೆ ನೀಡಿರುವ ಹಿನ್ನೆಲೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಹರ್‌ಘರ್ ತಿರಂಗಾ ಅಭಿಯಾನ ಯಶಸ್ವಿಯಾಗಿ ಮುಂದುವರೆದಿದೆ. ಇಂದು ಜಿಲ್ಲಾಡಳಿತದ ವತಿಯಿಂದ ಸ್ವಾತಂತ್ರ್ಯ ಜಾಗೃತಿ ಜಾಥಾ ನಡೆಸಲಾಯಿತು. ಚಿಕ್ಕಬಳ್ಳಾಪುರ, ಚಿಂತಾಮಣಿ, ಶಿಡ್ಲಘಟ್ಟ, ಗೌರಿಬಿದನೂರು ಮೊದಲಾದ ಕಡೆ ಶಾಲಾ ಮಕ್ಕಳು ತ್ರಿವರ್ಣ ಧ್ವಜದೊಂದಿಗೆ ಜಾಥಾದಲ್ಲಿ ಪಾಲ್ಗೊಂಡರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಹರ್‌ಘರ್ ತಿರಂಗ ಕಾರ್ಯಕ್ರಮವನ್ನು ವೈವಿಧ್ಯಮಯವಾಗಿ ಆಚರಿಸಲಾಗುವುದು. ಇದೇ ೧೩ ರಿಂದ ೧೫ನೇ ತಾರೀಖಿನವರೆಗೆ ಪ್ರತಿ ಮನೆಯಲ್ಲೂ ರಾಷ್ಟ್ರಧ್ವಜವನ್ನು ಹಾರಿಸಿ ದೇಶಾಭಿಮಾನವನ್ನು ಬಿಂಬಿಸುವ ಈ ವಿಶೇಷ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಉತ್ಸಾಹದಿಂದ ಈ ಕಾರ್ಯಕ್ರಮದಲ್ಲಿ ಪೊಲ್ಗೊಂಡು ಛಾಯಾಚಿತ್ರಗಳನ್ನು ಹರ್‌ಘರ್‌ತಿರಂಗಾ ಡಾಟ್ ಕಾಮ್ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಬೇಕು ಎಂದು ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ್ ಮನವಿ ಮಾಡಿದ್ದಾರೆ.

<><*<><>*><>

ಮಂಗಳೂರಿನ ಶಾಲಾ ವಿದ್ಯಾರ್ಥಿ ಹ್ಯಾಡ್ರಿಯನ್ ವೇಗಸ್ ಅಪರೂಪದ ಕ್ರೀಡಾದಾಖಲೆಯನ್ನು ಸೃಷ್ಟಿಸಿದ್ದಾರೆ. ನೀರಿನ ಅಡಿಯಲ್ಲಿ ಪಲ್ಟಿ ಹೊಡೆಯುವ ಸೋಮರ್ ಸಾಲ್ಟ್ಸ್ ಸಾಹಸಕ್ಕಾಗಿ ಅವರಿಗೆ ನೊಬೆಲ್ ವಿಶ್ವದಾಖಲೆಯ ಗೌರವ ದೊರೆತಿದೆ. ೮ನೇ ತರಗತಿಯ ವಿದ್ಯಾರ್ಥಿ ಹ್ಯಾಡ್ರಿಯನ್ ಮಂಗಳೂರಿನ ಎಮ್ಮೆಕೆರೆ ಅಂತಾರಾಷ್ಟ್ರೀಯ ಈಜುಕೊಳದಲ್ಲಿಂದು ನೀರೊಳಗೆ ಉಸಿರು ಬಿಗಿಹಿಡಿದು ೩೭ ಸೆಕೆಂಡ್‌ಗಳಲ್ಲಿ ೨೬ ಪಲ್ಟಿ ಹೊಡೆಯುವ ಮಲಕ ಈ ಸಾಧನೆ ಮಾಡಿದ್ದಾರೆ ಎಂದು ನೊಬೆಲ್ ವರ್ಲ್ಡ್ ರೆಕಾರ್ಡ್ಸ್‌ನ ರಾಜ್ಯ ನಿರ್ದೇಶಕ

ಡಾ. ಕೃಷ್ಣಮೂರ್ತಿ ತಿಳಿಸಿದ್ದಾರೆ. ಸಾಮಾನ್ಯವಾಗಿ ಈಜುಕೊಳದ ಅಂಚುಹಿಡಿದು ಪಲ್ಟಿ ಹಾಕಲಾಗುತ್ತದೆ. ಆದರೆ ಈಜುಕೊಳದ ನಡುವೆ ನೀರಿನಲ್ಲಿ ಏಕಕಾಲಕ್ಕೆ ೨೬ ಪಲ್ಟಿ ಹೊಡೆಯುವುದು ಅಸಾಧಾರಣ ಸಾಧನೆಯಾಗಿದೆ ಎಂದು ಹ್ಯಾಡ್ರಿಯನ್ ತರಬೇತುದಾರ ಅರೊಮಲ್ ಎ.ಎಸ್. ತಿಳಿಸಿದ್ದಾರೆ.

**<><*<><>*><>**

ರಾಜ್ಯದ ಹಲವೆಡೆ ಸತತ ಮುಂಗಾರು ಮಳೆಯ ಹಿನ್ನೆಲೆಯಲ್ಲಿ ಜಲಾಶಯಗಳು ಭರ್ತಿಯಾಗಿದ್ದು, ಜಿಲ್ಲಾಡಳಿತಗಳು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿವೆ. ಜಲಾಶಯಗಳಿಂದ ಹೆಚ್ಚುವರಿ ನೀರು ಹೊರಬಿಡುವ ವೇಳೆ ಹಾಗೂ ಅತಿವೃಷ್ಟಿ ಮತ್ತು ಪ್ರವಾಹದಂತಹ ಪರಿಸ್ಥಿತಿ ನಿರ್ವಹಣೆಗೆ ಸೂಕ್ತ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ. ಕಳೆದ ತಿಂಗಳ ೨೦ ರಿಂದ ಸತತ ಒಂದುವಾರ ಮಳೆಯಾದ ಕಾರಣ ತುಂಗಭದ್ರಾ ಜಲಾಶಯ ಭರ್ತಿಯಾಗುವ ಹಂತಕ್ಕೆ ತಲುಪಿದ್ದರಿಂದ ೩೦ ಕ್ರೆಸ್ಟ್ ಗೇಟ್‌ಗಳ ಮೂಲಕ ಹೆಚ್ಚುವರಿ ನೀರನ್ನು ನದಿಗೆ ಹರಿಯಬಿಡಲಾಗಿತ್ತು. ಜಲಾನಯನ ಪ್ರದೇಶದಲ್ಲಿನ ಜನ-ಜಾನುವಾರು ಸುರಕ್ಷತೆಗೆ ಜಿಲ್ಲಾಡಳಿತ ಸಾಕಷ್ಟು ಮುನ್ನೆಚ್ಚರಿಕೆ ವಹಿಸಿತ್ತು. ಸದ್ಯಕ್ಕೆ ಜಲಾನಯನ ಪ್ರದೇಶದ ಬಗ್ಗೆ ಸಂಪೂರ್ಣ ಮಾಹಿತಿಗಾಗಿ ತಾಲೂಕು ಮಟ್ಟದಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್. ದಿವಾಕರ್ ತಿಳಿಸಿದ್ದಾರೆ. ಬಾಗಲಕೋಟೆ ಜಿಲ್ಲೆಯಲ್ಲಿ ಅತಿವೃಷ್ಟಿಯಿಂದಾದ ನೆರೆ ಪರಿಸ್ಥಿತಿಯಲ್ಲಿ ಹಾನಿಯಾದ ಮನೆಗಳ ಪುನರ್‌ನಿರ್ಮಾಣ ದುರಸ್ಥಿ ಕಾರ್ಯ ಹಾಗೂ ಪ್ರವಾಹದಿಂದಾಗಿ ಗೃಹೋಪಯೋಗಿ ವಸ್ತುಗಳನ್ನು ಕಳೆದುಕೊಂಡ ಸಂತ್ರಸ್ತರಿಗೆ ಪರಿಹಾರ ಪಾವತಿಗಾಗಿ ಸರ್ಕಾರ ಮಂಜೂರಾತಿ ನೀಡಿ ಆದೇಶ ಹೊರಡಿಸಿರುವುದಾಗಿ ಜಿಲ್ಲಾಧಿಕಾರಿ ಜಾನಕಿ ಕೆ.ಎಂ. ತಿಳಿಸಿದ್ದಾರೆ. ಈ ಕುರಿತು ಅವರ, ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ : ಕೆ.ಎಂ. ಜಾನಕಿ

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ಚಿಕ್ಕಮಗಳೂರಿನಲ್ಲಿ ಅಕ್ಟೋಬರ್ ತಿಂಗಳಲ್ಲಿ ರಾಜ್ಯ ಮಟ್ಟದ ಕಬ್ಸ್ ಮತ್ತು ಬುಲ್ ಬುಲ್ ಉತ್ಸವ ನಡೆಯಲಿದೆ ಎಂದು ರಾಜ್ಯ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಮುಖ್ಯ ಆಯುಕ್ತ ಪಿ.ಜಿ ಆರ್ ಸಿಂಧ್ಯಾ ತಿಳಿಸಿದ್ದಾರೆ. ಒಟ್ಟು ೪

ದಿನ ಈ ಉತ್ಸವ ನಡೆಯಲಿದ್ದು, ವಿವಿಧ ಜಿಲ್ಲೆಗಳ ಶಾಲಾ ಮಕ್ಕಳು ಪಾಲ್ಗೊಳ್ಳಲಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.

೨. ಹಾವೇರಿ ಜಿಲ್ಲೆಯಲ್ಲಿ ಬೆಳೆ ಸಮೀಕ್ಷೆ ಮಾಹಿತಿ ಸಂಗ್ರಹದಲ್ಲಿ ಲೋಪದೋಷಗಳಿದ್ದಲ್ಲಿ ಆಕ್ಷೇಪ ಸಲ್ಲಿಸಲು ಈ ತಿಂಗಳ ೧೮ರವರೆಗೆ ಅವಕಾಶವಿರುತ್ತದೆ. ಬೆಳೆ ದಶಕ ಮೊಬೈಲ್ ಆಪ್ ಅಥವಾ ಬೆಳೆ ಸಮೀಕ್ಷೆ ತಂತ್ರಾಂಶದ ಮೂಲಕ ರೈತರು ಆಕ್ಷೇಪಣೆ ಸಲ್ಲಿಸಬಹುದು ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್ ತಿಳಿಸಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ,

ಕರಾವಳಿ ಮತ್ತು ಉತ್ತರ ಒಳನಾಡಿನಲ್ಲಿ ನೈಋತ್ಯ ಮುಂಗಾರು ದುರ್ಬಲವಾಗಿದ್ದು, ಹಲವೆಡೆ ಮಳೆಯಾಗಿದೆ. ಕೊಳ್ಳೆಗಾಲದಲ್ಲಿ ೫ ಸೆಂಟಿ ಮೀಟರ್, ಮಂಕಿಯಲ್ಲಿ ೪, ಶಿರಾಲಿ, ಮಂಗಳೂರು ಎಪಿ ವೀಕ್ಷಣಾಲಯ, ಮುನಿರಾಬಾದ್, ಶೋರಾಪುರ್, ನಂಜನಗೂಡು, ಕೋಲಾರದಲ್ಲಿ ತಲಾ ೩, ಮುಲ್ಕಿ, ಉಡುಪಿ, ಕೆಂಬಾವಿ, ಚಿಂತಾಮಣಿ ಪಿಟಿಒ, ನಾಗಮಂಗಲ, ಎಂಎಂ ಹಿಲ್ಸ್, ಕನಕಪುರದಲ್ಲಿ ತಲಾ ೨ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ೨೪ ತಾಸುಗಳಲ್ಲಿ ಕರಾವಳಿ ಹಾಗೂ ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ಮಳೆ ನಿರೀಕ್ಷಿತ. ಬೆಂಗಳೂರು ಮತ್ತು ಸುತ್ತಮುತ್ತ ಮೋಡಕವಿದ ವಾತಾವರಣವಿದ್ದು, ಹಗುರ ಮಳೆ ಸಾಧ್ಯತೆ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ **<>*><>**